ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಲಯ ಯಾದಗಿರಿ.

ಸಿಸಿ ನಂ. **324/2020**

| | | |
|---|---|---|
| ಸಾಕ್ಷಿಯ ಹೆಸರುಃ | ಗೋಪಾಲರೆಡ್ಡಿ | ಪ್ರಾಸಾಃ 4 |
| ತಂದೆ/ಗಂಡನ ಹೆಸರುಃ | ಶರಣಪ್ಪ | ಚಾಸಾಃ 9 |
| ವಯಸ್ಸು ಃ | 52 ವರ್ಷ | ದಿಃ 18-03-2026 |
| ಉದ್ಯೋಗಃ | ಎ.ಎಸ್.ಐ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ಯಾದಗಿರಿ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ

ನಾನು 2015 ರಿಂದ 2021 ರವರೆಗೆ ಸೈದಾಪೂರ ಪೋಲಿಸ ಠಾಣೆಯಲ್ಲಿ ನಾನು ಮುಖ್ಯಪೇದೆ ಎಂದು ಕರ್ತವ್ಯವನ್ನು ನಿರ್ವಹಿಸಿರುತ್ತೇನೆ.

ದಿನಾಂಕ 26-03-2020 ರಂದು ರಾಃ 08.30 ಗಂಟೆ ಸುಮಾರಿಗೆ ನಾನು ಠಾಣೆಯಲ್ಲಿದ್ದಾಗ ಚಾಸಾಃ 1 ರವರು ಮುದ್ದೆ ಮಾಲು ಮತ್ತು ಜಪ್ತಿ ಪಂಚನಾಮೆಯನ್ನು ಹಾಜರು ಪಡಿಸಿದಾಗ ನಾನು ಸದರಿ ಆಧಾರದ ಮೇಲೆ ನಮ್ಮ ಠಾಣಾ ಗುನ್ನೆ ಸಂಖ್ಯೆಃ 45/2020 ದಾಖಲಿಸಿಕೊಂಡಿರುತ್ತೇನೆ. ನಂತರ ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಕಳುಹಿಸಿರುತ್ತೇನೆ. ನಂತರ ಪ್ರ. ವ. ವರದಿಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-3 ಎಂದು ಸಾಕ್ಷಿಯ ಸಹಿ ನಿಪಿ-3(ಎ) ಎಂದು ಗುರುತಿಸಲಾಯಿತು. ನಂತರ ಚಾಸಾಃ 4 ರಿಂದ 7 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ಸಾಕ್ಷಿಗೆ ಒಂದು ದಾಖಲಾತಿ ತೋರಿಸಲಾಗಿ ಅದು ಜ್ಞಾಪಕ ಪತ್ರ ಆಗಿದ್ದು ಅದನ್ನು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೆ ನಿಪಿ-2 ಎಂದು ಸಾಕ್ಷಿಯ ಸಹಿ ನಿಪಿ-2(ಬಿ) ಎಂದು ಗುರುತಿಸಲಾಯಿತು.

ದಿನಾಂಕ 03-07-2020 ರಂದು ತಜ್ಞರ ವರದಿಯನ್ನು ನಿಪಿ-4 ರಂತೆ ಪಡೆದಿರುತ್ತೇನೆ. ದಿನಾಂಕಃ 10-07-2020 ರಂತೆ ನಿಪಿ-5 ರಂತೆ ಅಬಕಾರಿ ಇಲಾಖೆಯವರಿಗೆ ಪತ್ರ ವ್ಯವಹಾರವನ್ನು ಮಾಡಿರುತ್ತೇನೆ. ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ನಂತರ ಆರೋಪಿತರ ವಿರುದ್ಧ ಆರೋಪ ಸಾಭೀತಾದ ಹಿನ್ನಲೆಯಲ್ಲಿ ದಿನಾಂಕ 11-07-2020 ರಂದು ಮಾನ್ಯ ನ್ಯಾಯಾಲಯಕ್ಕೆ ದೋ.ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಸಾಕ್ಷಿಯು ಮು. ಮಾ. ಮತ್ತು ಆರೋಪಿತನನ್ನು ನೋಡಿ ಗುರುತಿಸಿರುತ್ತಾರೆ.

ಪಾಟಿ ಸವಾಲುಃ ಆರೋಪಿ ಪರ ಶ್ರೀ. ಎನ್. ಎಮ್. ಜಿ. ವಕೀಲರಿಂದ.

1. ನಾನು ಗುನ್ಹೆ ಸ್ಥಳಕ್ಕೆ ಭೇಟಿ ನೀಡಿರುವುದಿಲ್ಲ. ಪೊಲಿಸ ಸಿಬ್ಬಂದಿ ಹೊರತುಪಡಿಸಿ ಪ್ರತ್ಯಕ್ಷ ಸಾಕ್ಷಿದಾರರನ್ನು ವಿಚಾರಣೆ ಮಾಡಿರುವುದಿಲ್ಲ. ಕಾನೂನಿನ ಪ್ರಕಾರ ಎಷ್ಟು ಬೀಯರ ಬಾಟಲಿಗಳು ಇಟ್ಟುಕೊಳ್ಳಬಹುದು ಎಂದರೆ ಗೊತ್ತಿಲ್ಲ. ಆರೋಪಿತನು ಯಾವುದೇ ತಪ್ಪು ಮಾಡದೇ ಇದ್ದರೂ ಕೂಡ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಚಾಸಾಃ 1 ರವರ ಮಾತು ಕೇಳಿ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ